# ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 7ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

### 1. ಪ್ರಶ್ನೋತ್ತರ

| | | |
|---|---|---|
| ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಹತ್ತನೇ ಪಟ್ಟಿ |
| ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಹತ್ತನೇ ಪಟ್ಟಿ |

### 2. ವಿತ್ತೀಯ ಕಾರ್ಯಕಲಾಪಗಳು

2022–23ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

### 3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

**ಶ್ರೀ ಎ.ಟಿ. ರಾಮಸ್ವಾಮಿ ಅವರು** – ಬೆಂಗಳೂರು ನಗರ ಜಿಲ್ಲೆ ಬೇಗೂರು ಹೋಬಳಿ ಹುಳಿಮಾವು ಗ್ರಾಮದಲ್ಲಿ ಸರ್ಕಾರಿ ಭೂಮಿಯ ಹಕ್ಕು ದಾಖಲೆಗಳನ್ನು ಅಕ್ರಮವಾಗಿ ಖಾಸಗಿ ವ್ಯಕ್ತಿಯ ಹೆಸರುಗಳಿಗೆ ದಾಖಲೆ ಮಾಡಿರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ ಹಾಗೂ ಇದೇ ರೀತಿ ರಾಜ್ಯದಲ್ಲಿ ಹಲವಾರು ಪ್ರಕರಣಗಳಲ್ಲಿ ಸರ್ಕಾರದ ಆಸ್ತಿ ಲೂಟಿಯಾಗುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

### 4. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಮುಂಬೈ ಕರ್ನಾಟಕವನ್ನು ಕಿತ್ತೂರು ಕರ್ನಾಟಕವೆಂದು ನಾಮಕರಣ ಮಾಡಿರುವುದರಿಂದ, ವಾಯುವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯನ್ನು 'ಕಿತ್ತೂರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ' ಎಂದು ಮರು ನಾಮಕರಣ ಮಾಡುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಚೆನ್ನದಾಸರ್ ಕುಟುಂಬಗಳಿಗೆ ಪಡಿತರ ಚೀಟಿ, ಮಕ್ಕಳ ವಿದ್ಯಾಭ್ಯಾಸ ಹಾಗೂ ಇತರೆ ಸಾಮಾಜಿಕ ಭದ್ರತೆ ಪಡೆಯಲು ತೊಂದರೆಯಾಗುತ್ತಿರುವುದರಿಂದ ಸದರಿ ಕುಟುಂಬಗಳಿಗೆ ಜಾತಿ ಪ್ರಮಾಣ ಪತ್ರ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

..2/

3) **ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ ಬಯ್ಯಾಪುರ ಅವರು** – ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿಯಲ್ಲಿ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಮಂಜೂರು ಮಾಡಲಾಗಿರುವ ತಾಯಿ ಮತ್ತು ಮಕ್ಕಳ ಹೆರಿಗೆ ಆಸ್ಪತ್ರೆಗಳನ್ನು ರಾಜ್ಯ ಸರ್ಕಾರದಿಂದ ಮಂಜೂರು ಮಾಡಲು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ಪಿ. ರಾಜೀವ್ ಅವರು** – ಬೆಳಗಾವಿ ಜಿಲ್ಲೆ, ಕುಡಚಿ ಮತಕ್ಷೇತ್ರ ವ್ಯಾಪ್ತಿಯ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಶೈಕ್ಷಣಿಕ ಪ್ರಗತಿಯ ಹಿತದೃಷ್ಟಿಯಿಂದ ಮಕ್ಕಳ ಅನುಪಾತಕ್ಕೆ ಸರಿಯಾಗಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಹಾಗೂ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

5) **ಶ್ರೀ ಶಿವಾನಂದ ಎಸ್. ಪಾಟೀಲ ಅವರು** – ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ 1 ಮತ್ತು 2ರಲ್ಲಿ ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಕಲ್ಪಿಸಲಾಗಿರುವ ಪುನರ್ ವಸತಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

6) **ಶ್ರೀ ಶರತ್ ಕುಮಾರ್ ಬಚ್ಚೇಗೌಡ ಅವರು** – ನಿರ್ಮಾಣ ಕಾಮಗಾರಿಗಳ ವೆಚ್ಚವು ಇತ್ತೀಚೆಗೆ ಹೆಚ್ಚಾಗಿರುವುದರಿಂದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ತೊಂದರೆಯಾಗುತ್ತಿರುವುದರಿಂದ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7) **ಶ್ರೀ ಎ.ಟಿ. ರಾಮಸ್ವಾಮಿ ಅವರು** – ಅರಕಲಗೂಡು ಮತ್ತು ರಾಮನಾಥಪುರದಲ್ಲಿರುವ ಬಾಲಕಿಯರ ಪದವಿಪೂರ್ವ ಕಾಲೇಜುಗಳಿಗೆ ಕೌನ್ಸಿಲಿಂಗ್ ಮೂಲಕ ಬಂದಿದ್ದ ಭೌತಶಾಸ್ತ್ರ ಮತ್ತು ಜೀವಶಾಸ್ತ್ರ ಉಪನ್ಯಾಸಕರುಗಳನ್ನು ಬೇರೆಡೆಗೆ ನಿಯೋಜಿಸಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

8) **ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ ಅವರು** – ಗೌರಿಬಿದನೂರು ತಾಲ್ಲೂಕು ನಗರಸಭೆ ಸರಹದ್ದಿನ 5 ಕಿ.ಮೀ. ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಿಗೆ ಬಗರ್‌ಹುಕುಂ ಸಾಗುವಳಿಯನ್ನು ಮಂಜೂರು ಮಾಡಿ ಹೊರಡಿಸಿರುವ ಆದೇಶದಿಂದ ರೈತರಿಗೆ ಅನ್ಯಾಯವಾಗುತ್ತಿರುವುದರಿಂದ, ಸದರಿ ಆದೇಶವನ್ನು ಪುನರ್ ಪರಿಶೀಲಿಸಿ 3 ಕಿ.ಮೀ. ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಿಗೆ ಸೀಮಿತಗೊಳಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

**ಎಂ.ಕೆ.ವಿಶಾಲಾಕ್ಷಿ**
**ಕಾರ್ಯದರ್ಶಿ(ಪ್ರ)**

---